# ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆ

### ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು.

ಸಂಖ್ಯೆ:ಸಿ5[1]ಟಿಟಿಐ ಬೋ.ಸಿ.ಮರುನಿಯುಕ್ತಿ 1/2014-15 ದಿನಾಂಕ:26-06-2014

**ಅಧಿಕೃತ ಜ್ಞಾಪನ**

ವಿಷಯ: ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳು ಪೂರ್ಣ ಪ್ರಮಾಣದಲ್ಲಿ ಇಲ್ಲವಾದ್ದರಿಂದ ಕರ್ತವ್ಯ ನಿರತ ಸಿಬ್ಬಂದಿಗಳನ್ನು ಖಾಲಿ ಇರುವ ಹುದ್ದೆ/ಸಮನಾಂತರ ಹುದ್ದೆಗಳಿಗೆ ಮರುನಿಯುಕ್ತಿಗೊಳಿಸುವ ಕುರಿತು.

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ:ಇಡಿ.326. ಪಿಟಿಐ.2013 ದಿನಾಂಕ: 28.04.2014
2. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ ಬೆಂಗಳೂರು ಇವರ ಪತ್ರ ಸಂಖ್ಯೆ: ಶಿತ2/ವೇ.ಅನು:90/2013-14 ದಿ:06.05.2014
3. ಶಿಕ್ಷಕರ ತರಬೇತಿ ಸಂಸ್ಥೆಯ ಉಪನ್ಯಾಸಕರ ಮನವಿ ದಿನಾಂಕ: 22.05.2014

-*****-

**ಪ್ರಸ್ತಾವನೆ:**

ರಾಜ್ಯದ ವಿವಿಧ ಜಿಲ್ಲೆಗಳಲ್ಲಿನ ಡಯಟ್ ವ್ಯಾಪ್ತಿಯಲ್ಲಿ ಬರುವ ಶೂನ್ಯ ಹಾಗೂ ಕಡಿಮೆ ದಾಖಲಾತಿ ಹೊಂದಿರುವ ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಗಳಲ್ಲಿನ ಬೋಧಕ/ಬೋಧಕೇತರ ಸಿಬ್ಬಂದಿಗಳನ್ನು ಸರ್ಕಾರಿ ಸಂಸ್ಥೆಗಳಲ್ಲಿ ಖಾಲಿ ಇರುವ ತತ್ಸಮಾನ ಹುದ್ದೆಗಳಿಗೆ ಮರುನಿಯುಕ್ತಿಗೊಳಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಉಲ್ಲೇಖ-1ರ ಸರ್ಕಾರದ ಪತ್ರದಲ್ಲಿನ ನಿರ್ದೇಶನದಂತೆ, ಉಲ್ಲೇಖ-2ರ ಪತ್ರದಲ್ಲಿ 1) ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ನಾಗಮಂಗಲ ಮಂಡ್ಯ ಜಿಲ್ಲೆ, 2) ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ಬಾಚನಹಳ್ಳಿ ಮಳವಳ್ಳಿ ತಾಲ್ಲೂಕು ಮಂಡ್ಯ ಜಿಲ್ಲೆ, 3) ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ಆನವಟ್ಟಿ ಶಿವಮೊಗ್ಗ ಜಿಲ್ಲೆ, ಇಲ್ಲಿನ ಸಿಬ್ಬಂದಿಯವರನ್ನು ಮರುನಿಯುಕ್ತಿಗೊಳಿಸಲು ಕೋರಿರುತ್ತಾರೆ. ಉಲ್ಲೇಖ-3ರಲ್ಲಿ ಮೇಲ್ಕಂಡ ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಯ ಬೋಧಕೇತರ ನೌಕರರು ಮನವಿ ಸಲ್ಲಿಸಿ ಮರು ಸ್ಥಳನಿಯುಕ್ತಿಗೊಳಿಸುವಂತೆ ಕೋರಿರುತ್ತಾರೆ. ಅದರಂತೆ 1) ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ನಾಗಮಂಗಲ ಮಂಡ್ಯ ಜಿಲ್ಲೆ, 2) ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ಬಾಚನಹಳ್ಳಿ ಮಳವಳ್ಳಿ ತಾಲ್ಲೂಕು ಮಂಡ್ಯ ಜಿಲ್ಲೆ, ಮತ್ತು 3) ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ಆನವಟ್ಟಿ ಶಿವಮೊಗ್ಗ ಜಿಲ್ಲೆ ಇಲ್ಲಿ ಶೂನ್ಯ ಹಾಗೂ ಕಡಿಮೆ ದಾಖಲಾತಿ ಹೊಂದಿರುವುದರಿಂದ ಅಲ್ಲಿನ ಬೋಧಕೇತರ ಸಿಬ್ಬಂದಿಗೆ ಸ್ಥಳನಿಯುಕ್ತಿಗೊಳಿಸುವ ಸಂಬಂಧ ಸ್ಥಳ ಆಯ್ಕೆಗಾಗಿ ದಿನಾಂಕ: 23-06-2014 ರಂದು ಆಯುಕ್ತರ ಕಛೇರಿ ಸಭಾಂಗಣ, ಬೆಂಗಳೂರು ಇಲ್ಲಿ ಕೌನ್ಸಿಲಿಂಗ್ ನಡೆಸಲಾಗಿದ್ದು ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಯ ಬೋಧಕೇತರ ಸಿಬ್ಬಂದಿಗಳು ಅವರ ಇಚ್ಛೆಯಂತೆ ಸ್ಥಳ ಆಯ್ಕೆ ಮಾಡಿಕೊಂಡಿರುತ್ತಾರೆ. ಅದರಂತೆ ಮರು ಸ್ಥಳನಿಯುಕ್ತಿಗೊಳಿಸಿ ಆದೇಶ ಹೊರಡಿಸಿದೆ.

**ಆದೇಶ:-**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೆಳಕಂಡ ಬೋಧಕೇತರ ಸಿಬ್ಬಂದಿಯನ್ನು ಕೆಳಕಂಡ ಷರತ್ತಿಗೊಳಪಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅವರ ಹೆಸರಿನ ಮುಂದೆ ಸೂಚಿಸಿರುವ ಹುದ್ದೆ ಮತ್ತು ಸ್ಥಳಗಳಿಗೆ ಮರುಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

| ಕ್ರ.ಸಂ | ನೌಕರರ ಹೆಸರು, ಹುದ್ದೆ ಮತ್ತು ವಿಳಾಸ<br>ಶ್ರೀ / ಶ್ರೀಮತಿ | ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಆಯ್ಕೆ ಮಾಡಿ ಕೊಂಡಂತೆ ಮರುಸ್ಥಳನಿಯುಕ್ತಿಗೊಳಿಸಲಾದ ಹುದ್ದೆ ಮತ್ತು ಸ್ಥಳ |
|---|---|---|
| 1. | ಶ್ರೀಮತಿ ಎಂ.ಕೆ.ಪದ್ಮ, ಪ್ರ.ದ.ಸ, ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ನಾಗಮಂಗಲ, ಮಂಡ್ಯ ಜಿಲ್ಲೆ | ಸರ್ಕಾರಿ ಪ್ರೌಢಶಾಲೆ, ಲಕ್ಶ್ಮೀಸಾಗರ, ಪಾಂಡವಪುರ ತಾಲ್ಲೂಕು, ಮಂಡ್ಯ ಜಿಲ್ಲೆ [ಖಾಲಿ ಹುದ್ದೆಗೆ] |
| 2. | ಶ್ರೀ ಜಿ.ಎಸ್.ಅವಿನಾಶ್, ಪ್ರ.ದ.ಸ, ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ನಾಗಮಂಗಲ, ಮಂಡ್ಯ ಜಿಲ್ಲೆ | ಸರ್ಕಾರಿ ಪದವಿ ಪೂರ್ವ ಕಾಲೇಜು [ಪ್ರೌಢಶಾಲಾ ವಿಭಾಗ] ಬೇಲೂರು ರಸ್ತೆ, ಚಿಕ್ಕಮಗಳೂರು [ಖಾಲಿ ]ಹುದ್ದೆ |
| 3. | ಶ್ರೀ ಬೈರೇಶ್, ದ್ವಿ.ದ.ಸ, ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ಆನವಟ್ಟಿ, ಸೊರಬ ತಾಲ್ಲೂಕು, ಶಿವಮೊಗ್ಗ ಜಿಲ್ಲೆ | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಮಾಲೂರು, ಕೋಲಾರ ಜಿಲ್ಲೆ [ಖಾಲಿ ಹುದ್ದೆಗೆ] |
| 4. | ಶ್ರೀ ಎಂ.ಮಂಜುನಾಥ, ದ್ವಿ.ದ.ಸ, ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ,ಬಾಚನಹಳ್ಳಿ,ಮಂಡ್ಯಜಿಲ್ಲೆ | ಸರ್ಕಾರಿ ಪ್ರೌಢಶಾಲೆ, ತೈಲೂರು, ಮದ್ದೂರು ತಾಲ್ಲೂಕು ಮಂಡ್ಯ ಜಿಲ್ಲೆ [ಖಾಲಿ ಹುದ್ದೆಗೆ] |
| 5. | ಶ್ರೀ ಟಿ.ಲಕ್ಷ್ಮಣ, ಲ್ಯಾಬ್ ಅಟೆಂಡರ್, ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ,ನಾಗಮಂಗಲ,ಮಂಡ್ಯ ಜಿಲ್ಲೆ | ಮಂಡ್ಯ ಜಿಲ್ಲೆ |
| 6. | ಶ್ರೀ ಜಿ.ಕೆ.ಶಿವಮೂರ್ತಿ, ಲ್ಯಾಬ್ ಅಟೆಂಡರ್,ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ಆನವಟ್ಟಿ,ಸೊರಬ ತಾಲ್ಲೂಕು, ಶಿವಮೊಗ್ಗ ಜಿಲ್ಲೆ | ಶಿವಮೊಗ್ಗ ಜಿಲ್ಲೆ |
| 7. | ಶ್ರೀ ಜಯರಾಮ, ಗ್ರೂಪ್ ಡಿ ನೌಕರರು, ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ನಾಗಮಂಗಲ, ಮಂಡ್ಯ ಜಿಲ್ಲೆ | ಮಂಡ್ಯ ಜಿಲ್ಲೆ |
| 8. | ಶ್ರೀ ಎನ್.ರಮೇಶ್, ಗ್ರೂಪ್ ಡಿ ನೌಕರರು, ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ನಾಗಮಂಗಲ, ಮಂಡ್ಯ ಜಿಲ್ಲೆ | ಮಂಡ್ಯ ಜಿಲ್ಲೆ |
| 9. | ಶ್ರೀಮತಿ ಯಶೋಧ, ಗ್ರೂಪ್ ಡಿ ನೌಕರರು, ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ನಾಗಮಂಗಲ, ಮಂಡ್ಯ ಜಿಲ್ಲೆ | ಮಂಡ್ಯ ಜಿಲ್ಲೆ |
| 10. | ಶ್ರೀಮತಿ ಎನ್.ವಿ.ಇಂದ್ರಮ್ಮ, ಗ್ರೂಪ್ ಡಿ ನೌಕರರು, ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ನಾಗಮಂಗಲ, ಮಂಡ್ಯ ಜಿಲ್ಲೆ | ಮಂಡ್ಯ ಜಿಲ್ಲೆ |
| 11. | ಶ್ರೀಮತಿ ಮಂಗಳಮ್ಮ, ಗ್ರೂಪ್ ಡಿ ನೌಕರರು, ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ಬಾಚನಹಳ್ಳಿ, ಮಂಡ್ಯ ಜಿಲ್ಲೆ | ಮಂಡ್ಯ ಜಿಲ್ಲೆ |
| 12. | ಶ್ರೀ ನೀಲಕಂಠ, ಗ್ರೂಪ್ ಡಿ ನೌಕರರು, ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ಆನವಟ್ಟಿ, ಸೊರಬ ತಾಲ್ಲೂಕು, ಶಿವಮೊಗ್ಗ ಜಿಲ್ಲೆ | ಶಿವಮೊಗ್ಗ ಜಿಲ್ಲೆ |
| 13. | ಶ್ರೀಮತಿ ಬಿ.ಎಸ್.ರಾಧ, ಗ್ರೂಪ್ ಡಿ ನೌಕರರು, ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ಆನವಟ್ಟಿ, ಸೊರಬ ತಾಲ್ಲೂಕು, ಶಿವಮೊಗ್ಗ ಜಿಲ್ಲೆ | ಶಿವಮೊಗ್ಗ ಜಿಲ್ಲೆ |
| 14. | ಶ್ರೀಮತಿ ಲಕ್ಷ್ಮಮ್ಮ, ಗ್ರೂಪ್ ಡಿ ನೌಕರರು, ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ಆನವಟ್ಟಿ, ಸೊರಬ ತಾಲ್ಲೂಕು, ಶಿವಮೊಗ್ಗ ಜಿಲ್ಲೆ | ಶಿವಮೊಗ್ಗ ಜಿಲ್ಲೆ |

ಅಟೆಂಡರ್ ಮತ್ತು ಗ್ರೂಪ್ ಡಿ ನೌಕರರು ಅವರ ಇಚ್ಚಿಸಿರುವ ಜಿಲ್ಲೆಯನ್ನು ಆಯ್ಕೆ ಮಾಡಿಕೊಂಡಿದ್ದು, ಅದರಂತೆ ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರು ಇವರಿಗೆ ಕೌನ್ಸಿಲಿಂಗ್ ನಡೆಸಿ, ಅವರ ಜಿಲ್ಲಾ ವ್ಯಾಪ್ತಿಯ ಖಾಲಿ ಹುದ್ದೆಗೆ ಸ್ಥಳ ನಿಯುಕ್ತಿ ಆದೇಶ ನೀಡಲು ಸೂಚಿಸಿದೆ.

<u>ಷರತ್ತುಗಳು:-</u>

1. ನೌಕರರ ಇಚ್ಚೆಯಂತೆ ಸ್ಥಳ ಆಯ್ಕೆ ಮಾಡಿಕೊಂಡಿರುವುದರಿಂದ ಯಾವುದೇ ರೀತಿಯ ವರ್ಗಾವಣೆ ಭತ್ಯೆ ಹಾಗೂ ಸೇರುವಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.

2. ನೌಕರರ ಇಚ್ಛೆಯಂತೆ ಕೌನ್ಸಿಲಿಂಗ್ ಮೂಲಕ ಸ್ಥಳ ಆಯ್ಕೆ ಮಾಡಿಕೊಂಡಿರುವುದರಿಂದ ಯಾವುದೇ ಸ್ಥಳ ಮಾರ್ಪಾಡಿಗೆ ಅವಕಾಶವಿರುವುದಿಲ್ಲ.
3. ಸ್ಥಳನಿಯುಕ್ತಿಗೊಂಡಿರುವ ನೌಕರರು ಕರ್ತವ್ಯದಿಂದ ಬಿಡುಗಡೆ ಹೊಂದುವ ಪೂರ್ವದಲ್ಲಿ ಸಂಬಂಧಿಸಿದ ಉಪನಿದೇಶಕರು (ಅಭಿವೃದ್ಧಿ) ರವರ ಅನುಮತಿ ಪಡೆದು ಈ ಆದೇಶ ಹೊರಡಿಸಿದ ದಿನಾಂಕದಿಂದ 10 ದಿನಗಳ ಒಳಗಾಗಿ ಬಿಡುಗಡೆ ಹೊಂದಲು ತಿಳಿಸಿದೆ.
4. ನೌಕರರು ಕರ್ತವ್ಯದಿಂದ ಬಿಡುಗಡೆ ಹೊಂದಿದ ಹಾಗೂ ಕರ್ತವ್ಯಕ್ಕೆ ಹಾಜರಾದ ಬಗ್ಗೆ ಕೂಡಲೇ ಈ ಕಛೇರಿಗೆ ಮತ್ತು ಸಂಬಂಧಿಸಿದ ಎಲ್ಲಾ ಮೇಲಾಧಿಕಾರಿಗಳಿಗೆ ವರದಿ ಮಾಡುವುದು.

[ಕರಡು ಪ್ರತಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ]

[ಕೆ.ಎಸ್.ವೆಂಕಟೇಶಪ್ಪ]
ಅಪರ ಆಯುಕ್ತರು[ಆಡಳಿತ]

ಗೆ,

1) ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ನಾಗಮಂಗಲ ಮಂಡ್ಯ ಜಿಲ್ಲೆಯ ಸಂಬಂಧಿಸಿದ ನೌಕರರಿಗೆ
2) ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ಬಾಚನಹಳ್ಳಿ ಮಳವಳ್ಳಿ ತಾಲ್ಲೂಕು ಮಂಡ್ಯ ಜಿಲ್ಲೆಯ ಸಂಬಂಧಿಸಿದ ನೌಕರರಿಗೆ
3) ಸರ್ಕಾರಿ ಶಿಕ್ಷಕರ ತರಬೇತಿ ಸಂಸ್ಥೆ, ಆನವಟ್ಟಿ ಶಿವಮೊಗ್ಗ ಜಿಲ್ಲೆಯ ಸಂಬಂಧಿಸಿದ ನೌಕರರಿಗೆ

ಪ್ರತಿಯನ್ನು:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ ಬಹುಮಡಿ ಕಟ್ಟಡ, ಬೆಂಗಳೂರು
2. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ ಬೆಂಗಳೂರು
3. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
4. ಸಂಬಂಧಪಟ್ಟ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಿಗೆ.
5. ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಸಹ ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪ್ರಾದೇಶಿಕ ಪರೀಕ್ಷಾ ಮಂಡಳಿ, ಮೈಸೂರು
6. ಸಹ ನಿರ್ದೇಶಕರು-1 ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಸಾರ್ವಜನಿಕ ಶಿಕ್ಷಣ ಇಲಾಖೆಯ ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರಿಗೆ (ಆಡಳಿತ)
8. ಸಂಬಂಧಪಟ್ಟ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲರಿಗೆ
9. ಮಾನ್ಯ ಆಯುಕ್ತರ ಆಪ್ತ ಕಾರ್ಯದರ್ಶಿಗಳಿಗೆ ಮಾಹಿತಿಗಾಗಿ.
10. ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
11. ಸಂಬಂಧಿಸಿದ ಶಾಲಾ/ಕಾಲೇಜು/ಕಛೇರಿ ಮುಖ್ಯಸ್ಥರಿಗೆ.
12. ಕಛೇರಿ ಪ್ರತಿ.